**Bangalore**
**Regional News**
**17.09.2026: 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು :**

1. ಕಲ್ಯಾಣ ಕರ್ನಾಟಕ ಉತ್ಸವ ಹಿನ್ನೆಲೆ; ಕಲಬುರಗಿಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಧ್ವಜಾರೋಹಣ; ಹತ್ತು ನೂತನ ಕಾರ್ಯಕ್ರಮ ಘೋಷಣೆ
2. ನವೆಂಬರ್ ಅಂತ್ಯದೊಳಗೆ ತುಮಕೂರಿಗೆ ಎತ್ತಿನಹೊಳೆ ಯೋಜನೆಯ ನೀರು ಪೂರೈಕೆ - ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ
3. ದಕ್ಷಿಣ ಕನ್ನಡದ ತಣ್ಣೀರುಬಾವಿ ಬೀಚ್‌ನಲ್ಲಿ 'ಸ್ವಚ್ಛತೆಯ ಸೇವೆ' ಅಭಿಯಾನಕ್ಕೆ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಚಾಲನೆ
4. ಮಂಗಳೂರಿನಲ್ಲಿ ನಾಳೆ ಸಚಿವ ಸಂಪುಟ ಸಭೆ; ಇದೇ ೧೯ರ ವರೆಗೆ ನಗರದ ನಿಗದಿತ ಪ್ರದೇಶಗಳಲ್ಲಿ ಡ್ರೋನ್ ಹಾರಾಟ ನಿಷೇಧ
5. ಪ್ರಧಾನಿ ಜನ್ಮದಿನದ ಹಿನ್ನೆಲೆ; ರಾಜ್ಯದಲ್ಲಿಯೂ ಬಿಜೆಪಿಯಿಂದ ಸೇವಾ ಸಂಕಲ್ಪ ಅಭಿಯಾನ

***********

೭೯ನೇ ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಲಬುರಗಿಯಲ್ಲಿಂದು ಧ್ವಜಾರೋಹಣ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗದಲ್ಲಿ ೫೦ ಸಾವಿರ ನಿವೇಶನ ಹಂಚಿಕೆ, ೩೦ ಎಕರೆ ಪ್ರದೇಶದಲ್ಲಿ ಐಟಿ ಪಾರ್ಕ್ ಅಭಿವೃದ್ಧಿ, ಕ್ರೀಡಾನಗರ ಸ್ಥಾಪನೆ, ಕೋಟಿ ವೃಕ್ಷ ಅಭಿಯಾನ ಸೇರಿದಂತೆ ಹತ್ತು ನೂತನ ಕಾರ್ಯಕ್ರಮಗಳನ್ನು ಘೋಷಿಸಿದ್ದಾರೆ. ಈ ಭಾಗದ ಗಂಭೀರ ಸಮಸ್ಯೆಯಾದ ರಕ್ತ ಹೀನತೆ ತಡೆ ಯೋಜನೆ, ಅಪರಾಧ ತಡೆ, ಸಂಚಾರ ನಿಯಂತ್ರಣಕ್ಕೆ ಎಐ ಆಧಾರಿತ ಸಿಸಿಟಿವಿ ಕ್ಯಾಮೆರಾ, ನವೋದ್ಯಮಗಳು, ಯುವ ಉದ್ಯಮಿಗಳನ್ನು ಉತ್ತೇಜಿಸಲು ಕ್ರಿಯಾ ಸ್ಥಾಪನೆ, ಕಲ್ಯಾಣ ಕರ್ನಾಟಕ ಎಕಾನಮಿ ಮಿಷನ್ ಸ್ಥಾಪನೆ, ಜೈವಿಕ ಆರ್ಥಿಕ ಮಿಷನ್, ೫೦ ಕೋಟಿ ವೆಚ್ಚದಲ್ಲಿ ಪ್ರವಾಸೋದ್ಯಮ ತಾಣಗಳ ಅಭಿವೃದ್ಧಿ ಈ ಹೊಸ ಘೋಷಣೆಗಳಲ್ಲಿ ಒಳಗೊಂಡಿದೆ ಎಂದು ಹೇಳಿದ್ದಾರೆ. ಬೆಂಗಳೂರು, ಕರ್ನಾಟಕದ ಕಿರೀಟವಾಗಿದ್ದು, ಕಲ್ಯಾಣ ಕರ್ನಾಟಕ ಶಕ್ತಿಪೀಠವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

****ಧ್ವನಿ****ಮುಖ್ಯಮಂತ್ರಿ

ಇದಕ್ಕೂ ಮೊದಲು ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕಲಬುರಗಿ ನಗರದಲ್ಲಿನ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.

***********

ಹಿಂದುಳಿದಿರುವ ಕಲ್ಯಾಣ ಕರ್ನಾಟಕ ಪ್ರದೇಶವನ್ನು ಅಭಿವೃದ್ಧಿಯ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಯಾದಗಿರಿಯಲ್ಲಿ ನಡೆದ ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಮಾತನಾಡಿದ ಅವರು, ಈ ಭಾಗದಲ್ಲಿ ೩೭೧(ಜೆ) ವಿಶೇಷ ಸ್ಥಾನಮಾನದಡಿ ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಸ್ಥಳೀಯ ಯುವಕರಿಗೆ ಹೆಚ್ಚಿನ ಅವಕಾಶಗಳು ದೊರೆಯುತ್ತಿವೆ ಎಂದು ಹೇಳಿದ್ದಾರೆ. ದೇಶಕ್ಕೆ ೧೯೪೭ರ ಆಗಸ್ಟ್ ೧೫ರಂದು ಸ್ವಾತಂತ್ರ್ಯ ದೊರೆತರೆ, ಹೈದರಾಬಾದ್ ನಿಜಾಮರ ಆಡಳಿತದಲ್ಲಿದ್ದ ಈ ಭಾಗವು ೧೯೪೮ರ ಸೆಪ್ಟೆಂಬರ್ ೧೭ರಂದು ವಿಮೋಚನೆಗೊಂಡಿತು ಎಂದು ಕಲ್ಯಾಣ ಕರ್ನಾಟಕ ವಿಮೋಚನಾ ಹೋರಾಟದ ಇತಿಹಾಸವನ್ನು ಸ್ಮರಿಸಿದ್ದಾರೆ. ಪಂಡಿತ್ ಜವಾಹರಲಾಲ್ ನೆಹರೂ ಹಾಗೂ ಸರ್ದಾರ್ ವಲ್ಲಭಭಾಯ್ ಪಟೇಲ್ ನಿರ್ಧಾರದಂತೆ ನಡೆದ ಪೊಲೀಸ್ ಕಾರ್ಯಾಚರಣೆಯ ಬಳಿಕ ಈ ಪ್ರದೇಶ ನಿಜಾಮರ ಆಡಳಿತದಿಂದ ಮುಕ್ತವಾಯಿತು ಎಂದು ಹೇಳಿದ್ದಾರೆ. ಇನ್ನೊಂದೆಡೆ ಬಳ್ಳಾರಿ ಜಿಲ್ಲಾಡಳಿತ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಟಿ.ರಘುಮೂರ್ತಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ. ಜಿಲ್ಲಾ ಸಶಸ್ತ್ರ ಪೊಲೀಸ್ ಮೀಸಲು ಪಡೆಯಿಂದ ಗೌರವ ವಂದನೆ ಸ್ವೀಕರಿಸಿದರು. ಈ ವೇಳೆ ಮಾತನಾಡಿದ ಅವರು, ಸ್ವಾತಂತ್ರ್ಯ ನಂತರ ಅಭಿವೃದ್ಧಿಯಲ್ಲಿ ತೀವ್ರವಾಗಿ ಹಿಂದುಳಿದಿದ್ದ ಕಲ್ಯಾಣ ಕರ್ನಾಟಕದಲ್ಲಿನ ಅಸಮತೋಲನ ಸರಿಪಡಿಸಲು, ಉದ್ಯೋಗ ಮತ್ತು ಶೈಕ್ಷಣಿಕ ಅಭಿವೃದ್ಧಿಗೆ ೩೭೧ ಜೆ. ಜಾರಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

***********

ಮಹತ್ವಾಕಾಂಕ್ಷೆಯ ಎತ್ತಿನಹೊಳೆ ಯೋಜನೆಯ ನೀರನ್ನು ನವೆಂಬರ್ ಅಂತ್ಯದೊಳಗೆ ತುಮಕೂರಿಗೆ ಪೂರೈಸಲಾಗುವುದು ಎಂದು ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ ತಿಳಿಸಿದ್ದಾರೆ. ಗುಬ್ಬಿ ತಾಲೂಕಿನ ಕಂಚಿಗನಹಳ್ಳಿಯಲ್ಲಿ ನಡೆಯುತ್ತಿರುವ ಯೋಜನೆಯ ಪ್ಯಾಕೇಜ್ ೧೧ರ ಕಾಮಗಾರಿ ಪರಿಶೀಲಿಸಿದ ಅವರು, ನಿರ್ಮಾಣ ಕಾರ್ಯವನ್ನು ತ್ವರಿತಗೊಳಿಸುವಂತೆ ಸೂಚಿಸಿದ್ದಾರೆ. ನೇತ್ರಾವತಿ ನದಿಯ ಉಪನದಿಯಾದ ಎತ್ತಿನಹೊಳೆ ನೀರನ್ನು ತಿರುಗಿಸುವ ಮೂಲಕ ರಾಜ್ಯದ ಪೂರ್ವ ಮತ್ತು

ಮಧ್ಯ ಭಾಗದ ಬರಪೀಡಿತ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಗುರಿ ಹೊಂದಲಾಗಿದೆ. ತುಮಕೂರು ಭಾಗದ ಕಾಮಗಾರಿಯನ್ನು ಅಕ್ಟೋಬರ್ ೧೫ರೊಳಗೆ ಪೂರ್ಣಗೊಳಿಸಲಾಗುವುದು. ಯೋಜಿತ ನೀರು ಪೂರೈಕೆಯನ್ನು ಶೇಕಡ ೧೦೦ರಷ್ಟು ಖಚಿತಪಡಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಗುರುತ್ವಾಕರ್ಷಣಾ ಕಾಲುವೆ ನಿರ್ಮಾಣದಲ್ಲಿ ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ. ೮ ಸಾವಿರ ಕೋಟಿಗಳಿಷ್ಟಿದ್ದ ಈ ಯೋಜನೆಯ ಅಂದಾಜು ವೆಚ್ಚ ೨೩ ಸಾವಿರ ಕೋಟಿ ರೂಪಾಯಿಗೆ ಏರಿಕೆಯಾಗಿದೆ ಎಂದು ತಿಳಿಸಿದ್ದಾರೆ.

***********

ನೂರು ದಿನದಲ್ಲಿ ತುಮಕೂರಿಗೆ ಎತ್ತಿನಹೊಳೆ ನೀರು ಹರಿಸುವ ಗುರಿಯಿದೆ ಎಂದು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ತಿಳಿಸಿದ್ದಾರೆ. ಅರಸೀಕೆರೆ ತಾಲ್ಲೂಕಿನ ತಳಲುತೊರೆಯಲ್ಲಿ ನಿರ್ಮಾಣವಾಗುತ್ತಿರುವ ಎತ್ತಿನಹೊಳೆ ಯೋಜನೆ ಗುರುತ್ವ ಕಾಲುವೆ ಪ್ಯಾಕೇಜ್-೮ರ ಕಾಮಗಾರಿಯ ಪ್ರಗತಿ ಪರಿಶೀಲನೆ ನಡೆಸಿ, ಮಾತನಾಡಿದ ಅವರು, ಶೀಘ್ರದಲ್ಲೇ ತಾಲ್ಲೂಕಿನ ಜನತೆ ನದಿ ನೀರನ್ನು ನೋಡುವ ದಿನಗಳು ಬರಲಿವೆ ಎಂದು ಹೇಳಿದ್ದಾರೆ. ಈ ಯೋಜನೆ ಪೂರ್ಣಗೊಂಡರೆ ಜಿಲ್ಲೆಗೆ ಕುಡಿಯುವ ನೀರು ದೊರೆಯಲಿದೆ, ಕೆರೆಗಳು ತುಂಬಲಿವೆ, ಅಂತರ್ಜಲ ವೃದ್ಧಿಸಿ ಕೊಳವೆಬಾವಿಗಳಲ್ಲಿ ನೀರು ಕಾಣಬಹುದು ಎಂದು ಆಶಾವಾದ ವ್ಯಕ್ತಪಡಿಸಿದ್ದಾರೆ. ಕಾಮಗಾರಿ ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ನದಿ ನೀರಿನ ಹರಿವಿಗೆ ಅವಕಾಶ ಮಾಡಿಕೊಡಬೇಕು ಎಂದು ಸಚಿವರು, ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

***********

ಮಂಗಳೂರಿನ ತಣ್ಣೀರುಬಾವಿ ಬೀಚ್‌ನಲ್ಲಿ ಇಂದು 'ಸ್ವಚ್ಛತೆಯ ಸೇವೆ' ಅಭಿಯಾನಕ್ಕೆ ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪರಿಸರ ಹಾಗೂ ಸಾರ್ವಜನಿಕ ಸ್ಥಳಗಳ ಸ್ವಚ್ಛತೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದು ತಿಳಿಸಿದ್ದಾರೆ. ಸ್ವಚ್ಛ ಹಾಗೂ ನೈರ್ಮಲ್ಯಯುತ ವಾತಾವರಣ ಪ್ರವಾಸಿಗರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಕರ್ಷಿಸುವುದರ ಜೊತೆಗೆ, ಪ್ರವಾಸೋದ್ಯಮದ ಬೆಳವಣಿಗೆಯ ಮೂಲಕ ಸ್ಥಳೀಯ ಆರ್ಥಿಕತೆಗೂ ಉತ್ತೇಜನ ನೀಡಲಿದೆ ಎಂದು ಹೇಳಿದ್ದಾರೆ. ಸ್ವಚ್ಛತೆಯನ್ನು ಕೇವಲ ಒಂದು ದಿನದ ಕಾರ್ಯಕ್ರಮಕ್ಕೆ ಸೀಮಿತಗೊಳಿಸದೆ, ನಿರಂತರ ಜನಾಂದೋಲನವಾಗಿ ರೂಪಿಸಬೇಕು ಎಂದು ಕರೆ ನೀಡಿದ್ದಾರೆ. ಅಭಿಯಾನದ ಅಂಗವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಲ್ಲರೂ ಸಾಮೂಹಿಕವಾಗಿ 'ಸ್ವಚ್ಛತಾ ಪ್ರತಿಜ್ಞೆ' ಸ್ವೀಕರಿಸಿದರು. ಬಳಿಕ ಬೀಚ್ ಆವರಣದಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಯಿತು.

***********

ಮಂಗಳೂರಿನಲ್ಲಿ ನಾಳೆ ಸಚಿವ ಸಂಪುಟ ಸಭೆ ನಡೆಯಲಿದೆ. ಸಭೆಯಲ್ಲಿ ಪ್ರಮುಖವಾಗಿ ಕರಾವಳಿಯ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ. ಖಾದರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರಾವಳಿಯ ಬಹು ದಿನದ ಬೇಡಿಕೆಗಳು ಈಡೇರುವ ನಿಟ್ಟಿನಲ್ಲಿ ಸಚಿವ ಸಂಪುಟ ಸಭೆ ಮುಖ್ಯ ವೇದಿಕೆಯಾಗಲಿದೆ ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಹಾಗೂ ಸಂಪುಟ ಸಚಿವರ ಭದ್ರತೆ ಮತ್ತು ಸಾರ್ವಜನಿಕರ ಸುರಕ್ಷತೆಯ ಹಿತ ದೃಷ್ಟಿಯಿಂದ ಇದೇ ೧೯ರ ವರೆಗೆ ನಗರದ ನಿಗದಿತ ಪ್ರದೇಶಗಳಲ್ಲಿ ಡ್ರೋನ್ ಹಾರಾಟ ನಿಷೇಧಿಸಲಾಗಿದೆ. ಮಂಗಳೂರಿನ ಮೇರಿಹಿಲ್ ಹೆಲಿಪ್ಯಾಡಿನ ಸುತ್ತ ಹಾಗೂ ಮುಖ್ಯಮಂತ್ರಿ ವಾಸ್ತವ್ಯದ ಹೊಟೇಲ್ ಸುತ್ತಮತ್ತ, ಸಚಿವ ಸಂಪುಟ ಸಭೆ ನಡೆಯುವ ಪಡೀಲ್‌ನಲ್ಲಿರುವ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿ 'ಪ್ರಜಾಸೌಧ' ದ ಸುತ್ತಲಿನ ಒಂದು ಕಿಲೋಮೀಟರ್ ವ್ಯಾಪ್ತಿಯನ್ನು ತಾತ್ಕಾಲಿಕ ರೆಡ್ ಜೋನ್ ಎಂದು ಘೋಷಿಸಲಾಗಿದೆ. ಈ ವ್ಯಾಪ್ತಿಯಲ್ಲಿ ಯಾವುದೇ ಮಾದರಿಯ ಡ್ರೋಣ್ ಹಾರಾಟ, ಬಳಕೆ ಮತ್ತು ಕಾರ್ಯಾಚರಣೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ನಗರ ಪೋಲಿಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ಮಾಹಿತಿ ನೀಡಿದ್ದಾರೆ.

***********

ಪ್ರಧಾನಿ ನರೇಂದ್ರ ಮೋದಿ ಜನ್ಮದಿನದ ಅಂಗವಾಗಿ ರಾಜ್ಯದಲ್ಲಿಯೂ ಸೇವಾ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸೇವಾ ಸಂಕಲ್ಪ ದಿನದ ಅಭಿಯಾನದ ಅಂಗವಾಗಿ ರೈಲ್ವೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಇಂದು ಸಂಜೆ ಬೆಂಗಳೂರಿನ ಕೆ.ಎಸ್.ಆರ್. ರೈಲು ನಿಲ್ದಾಣದಲ್ಲಿ ಉತ್ತಮ ಕಾರ್ಯ ನಿರ್ವಹಣೆ ತೋರಿದ ನೈಋತ್ಯ ರೈಲ್ವೆಯ ೨೫ ಸಿಬ್ಬಂದಿಯನ್ನು ಸನ್ಮಾನಿಸಲಿದ್ದಾರೆ ಹಾಗೂ ನೈಋತ್ಯ ರೈಲ್ವೆ ಸಿಬ್ಬಂದಿಯೊಂದಿಗೆ ಆಶೀರ್ವಾದದ ದೀಪವನ್ನು ಹಚ್ಚಲಿದ್ದಾರೆ. ಬೆಂಗಳೂರಿನ ಮಲ್ಲೇಶ್ವರಂನ ಸುಬೇದಾರಪಾಳ್ಯದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಏರ್ಪಡಿಸಲಾದ ಆರೋಗ್ಯ ಶಿಬಿರ ಮತ್ತು ಅನ್ನದಾನ ಕಾರ್ಯಕ್ರಮಕ್ಕೆ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮತ್ತು ಮಾಜಿ ಉಪಮುಖ್ಯಮಂತ್ರಿ ಡಾ. ಸಿ. ಎನ್. ಅಶ್ವಥ್ ನಾರಾಯಣ್ ಚಾಲನೆ ನೀಡಿದರು. ಪ್ರಧಾನಿ ಜನ್ಮದಿನದ ಅಂಗವಾಗಿ ದಕ್ಷಿಣ ಕನ್ನಡ ಜಿಲ್ಲಾ ಬಿಜೆಪಿ ವತಿಯಿಂದ ಮಂಗಳೂರಿನ ಕದ್ರಿ ಮಂಜುನಾಥ ದೇವಾಲಯದಲ್ಲಿ ವಿಶೇಷ ರುದ್ರಾಭಿಷೇಕ ಹಾಗೂ ಪೂಜೆ ನೆರವೇರಿಸಲಾಯಿತು. ಚಿಕ್ಕಮಗಳೂರು ಜಿಲ್ಲೆಯ ಹಿರೇಗೌಜ ಗ್ರಾಮದಲ್ಲಿಂದು ಪ್ರಧಾನಿ ಅವರ ಜನ್ಮ ದಿನಾಚರಣೆಯನ್ನು ಸ್ವಚ್ಚತಾ ಅಭಿಯಾನದ ಮೂಲಕ ಆಚರಿಸಲಾಯಿತು. ವಿಧಾನಪರಿಷತ್ ಸದಸ್ಯ ಸಿ.ಟಿ ರವಿ, ಬಿ.ಜೆ.ಪಿ ಕಾರ್ಯಕರ್ತರೊಂದಿಗೆ ಪಾಲ್ಗೊಂಡು ಗ್ರಾಮದ ದೇವಾಲಯ ಸುತ್ತ

ಮುತ್ತ ಸ್ವಚ್ಚತಾ ಅಭಿಯಾನ ನಡೆಸಿದರು. ಇದೇ ವೇಳೆ ನಡೆದ ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆಯರನ್ನು ಸಿ.ಟಿ ರವಿ ಸನ್ಮಾನಿಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ೭೫ನೇ ಜನ್ಮದಿನವನ್ನು ದಾವಣಗೆರೆಯ ದೇವರಾಜ್ ಅರಸು ಬಡಾವಣೆಯಲ್ಲಿರುವ ವಿಶೇಷ ಚೇತನ ಹೆಣ್ಣು ಮಕ್ಕಳ ಶಾಲೆಯಲ್ಲಿ  ಅರ್ಥಪೂರ್ಣವಾಗಿ ಆಚರಿಸಲಾಯಿತು. ಕೇಂದ್ರದ ಮಾಜಿ ಸಚಿವ ಡಾ.ಜಿ.ಎಂ.ಸಿದ್ದೇಶ್ವರ್, ಮಕ್ಕಳ ಶೈಕ್ಷಣಿಕ ಬಳಕೆಗೆ ಅನುಕೂಲವಾಗುವಂತೆ ವಿವಿಧ ಪರಿಕರಗಳು ಹಾಗೂ ದಿನನಿತ್ಯದ ಅಗತ್ಯ ವಸ್ತುಗಳನ್ನು ನೀಡಿದರು.

********END*******